ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 ದಿನಾಂಕ : 16–09–2020

**KIND ATTENTION : MEDIA FRIENDS**

**AN APPEAL! A PLEA!! A REQUEST!!!**

As you are aware, the 7th Session of the 15th Karnataka Legislative Assembly will commence from September 21.

In view of the Covid-19 pandemic, the Assembly Secretariat has taken lot of precautions to ensure the safety of not merely the Hon'ble Members of the House, but also all other stake-holders including officers deputed for duty and representatives of the Media, during the session.

Reporters of Electronic and Print Media, who have Media Passes and are assigned for covering the proceedings at the session, are requested to under go RT-PCR Test, on or after September 18.

The Media Persons are at liberty to undergo RT-PCR Test, any Government Hospital or a Government Medical Institution.

The Assembly Secretariat has also organised a **Special Camp for Media Persons for RT-PCR Test**, who possess Media Pass, issued by the Karnataka Legislative Assembly, and are assigned to cover the Assembly Proceedings by their respective Media Institutions, on Saturday on **September 19from 10-00 A M and 4-00 P M at the Banquet Hall of Vidhana Soudha in Bengaluru**.

**If the test result is NEGATIVE, then only the Media Persons are allowed to the precincts of the Assembly in the Second Floor to cover the proceedings.**

The Members of the Media may kindly note that they should come along with their Media Passes issued by the Karnataka Legislative Assembly and a Certificate, stating Covid-19 Test Result NEGATIVE, which is mandatory, to cover the proceedings at the Session.

**LET US THINK POSITIVE! LET OUR COVID-19 TEST RESULT BE NEGATIVE!!**

**D. P. MURALIDHAR**
**JOINT DIRECTOR ( NEWS )**

# ಪತ್ರಿಕಾ ಪ್ರಕಟಣೆ

## ಕೋವಿಡ್–19ರ ಹಿನ್ನೆಲೆಯಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ವಿವಿಧ ಯೋಜನೆಗಳಡಿ ಆರ್ಥಿಕ ಸ್ಪಂದನ ಉದ್ಘಾಟನೆ – ಬಿ.ಎಸ್.ವೈ

**ಬೆಂಗಳೂರು, ಸೆಪ್ಟಂಬರ್ 16(ಕರ್ನಾಟಕ ವಾರ್ತೆ):**

"ಸರ್ವರಿಗೂ ಸಮಪಾಲು, ಸರ್ವರಿಗೂ ಸಮಬಾಳು" ಎಂಬ ತತ್ವ ಜಾಗತಿಕ, ಆರ್ಥಿಕ ವ್ಯವಸ್ಥೆಯಲ್ಲಿ ವಹಿಸಿರುವ ಪಾತ್ರ ಅನನ್ಯವಾದದ್ದು. ಮುಖ್ಯಮಂತ್ರಿಗಳ ಕೋವಿಡ್–19 ಪರಿಹಾರ ನಿಧಿಗೆ ರೂ. 53 ಕೋಟಿಗಳ ದೇಣಿಗೆಯನ್ನು ನೀಡುವ ಮೂಲಕ ಸಹಕಾರ ಸಂಸ್ಥೆಗಳು ಸರ್ಕಾರದೊಂದಿಗೆ ಕೈಜೋಡಿಸಿದ್ದಾರೆ. ಈ ಸಾಂಕ್ರಾಮಿಕ ರೋಗದ ನಿಯಂತ್ರಣಕ್ಕೆ ಇಡೀ ದೇಶದಲ್ಲಿಯೇ ಮೊದಲು ಮುಂದಾದ ರಾಜ್ಯ ಕರ್ನಾಟಕ ಎಂದು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ತಿಳಿಸಿದರು.

ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಸಹಕಾರ ಇಲಾಖೆಯ ವತಿಯಿಂದ ಆಯೋಜಿಸಿದ್ದ ಕೋವಿಡ್–19ರ ಹಿನ್ನೆಲೆಯಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ವಿವಿಧ ಯೋಜನೆಗಳಡಿ ಆರ್ಥಿಕ ಸ್ಪಂದನ ಕಾರ್ಯಕ್ರಮವನ್ನು ಮುಖ್ಯಮಂತ್ರಿಗಳು ಉದ್ಘಾಟಿಸಿ ನಂತರ ಅರ್ಹ ಫಲಾನುಭವಿಗಳಿಗೆ ಚೆಕ್ ಮತ್ತು ಸೌಲಭ್ಯವನ್ನು ವಿತರಿಸಿ ಮಾತನಾಡಿದರು.

ಬೃಹತ್ತಾದ ಮತ್ತು ಮಹತ್ವದ ಸಹಕಾರ ಚಳವಳಿಯನ್ನು ರೂಪಿಸಿದ ರಾಷ್ಟ್ರ ನಮ್ಮದು. ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ಆಶಯದಂತೆ ಭಾರತ ದೇಶದಲ್ಲಿ ಸಹಕಾರ ಕ್ಷೇತ್ರವು ಹೆಮ್ಮರವಾಗಿ ಬೆಳೆದಿದೆ. ಸಹಕಾರ

ಚಳುವಳಿ ಆರ್ಥಿಕವಾಗಿ ಹಿಂದುಳಿದವರ, ಕೆಳವರ್ಗದ ಜನರ ಮತ್ತು ಮಹಿಳೆಯರ ಸ್ವಾವಲಂಬನೆ ಹಾಗೂ ಆರ್ಥಿಕ ಅಭಿವೃದ್ಧಿಯಲ್ಲಿ ಮಹತ್ತರ ಪಾತ್ರ ವಹಿಸಿದೆ. ಪ್ರಕೃತಿ ವಿಕೋಪ ಹಾಗೂ ಕೋವಿಡ್-19 ಸೋಂಕಿನ ಹಾವಳಿಯಿಂದ ಕಂಗೆಟ್ಟಿರುವ ಜನತೆಗೆ ರಾಜ್ಯದ ಸಹಕಾರ ಸಂಸ್ಥೆಗಳು ಆರ್ಥಿಕ ನೆರವು ನೀಡುವ ಮೂಲಕ ಸಹಾಯ ಹಸ್ತ ಚಾಚಿದೆ ಎಂದು ತಿಳಿಸಿದರು.

ಲಾಕ್‌ಡೌನ್ ಪರಿಣಾಮವಾಗಿ, ಎಲ್ಲ ವರ್ಗದ ಜನತೆ ಆರ್ಥಿಕ ಸಂಕಷ್ಟವನ್ನು ಎದುರಿಸುತ್ತಿದ್ದು, ಆರ್ಥಿಕ ವ್ಯವಸ್ಥೆಯನ್ನು ಸುಧಾರಿಸಲು ಸರ್ಕಾರ 2,272 ಕೋಟಿ ರೂ.ಗಳ ಮೂರು ಹಂತದ ಪ್ಯಾಕೇಜನ್ನು ಘೋಷಿಸಿತು. 42,524 ಆಶಾ ಕಾರ್ಯಕರ್ತೆಯರಿಗೆ ಪ್ರೋತ್ಸಾಹ ಧನ ತಲಾ ರೂ. 3,000/- ಗಳಂತೆ ಒಟ್ಟು 12.75 ಕೋಟಿ ರೂ.ಗಳನ್ನು ಸಹಕಾರ ಸಂಘಗಳ ಮೂಲಕ ವಿತರಣೆ ಮಾಡಲಾಗಿದೆ. ಕೃಷಿ ಹಾಗೂ ಕೃಷಿಯೇತರ ವಲಯಕ್ಕೆ ಒಟ್ಟಾರೆಯಾಗಿ 39,300 ಕೋಟಿ ರೂ.ಗಳ ಸಾಲ ಸೌಲಭ್ಯವನ್ನು ರಾಜ್ಯದ ಸಹಕಾರ ಸಂಸ್ಥೆಗಳ ಮೂಲಕ ಒದಗಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಪ್ರಧಾನ ಮಂತ್ರಿಗಳ "ಆತ್ಮನಿರ್ಭರ ಭಾರತ" ಪ್ಯಾಕೇಜ್ ಅಡಿಯಲ್ಲಿ ಸಹಕಾರ ಕ್ಷೇತ್ರದ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ ಯೋಜನೆ ಘೋಷಣೆ ಮಾಡಲಾಗಿದೆ. ರೈತ ಉತ್ಪಾದಕ ಸಂಸ್ಥೆ ಮತ್ತು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳನ್ನು ಬಲಿಷ್ಠಗೊಳಿಸಲು 4,525 ಕೋಟಿ ರೂ. ಮೊತ್ತವನ್ನು ರಾಜ್ಯಕ್ಕೆ ಹಂಚಿಕೆ ಮಾಡಲಾಗಿದೆ. ಈ ಯೋಜನೆಯಡಿಯಲ್ಲಿ ಗ್ರಾಮೀಣ ಪ್ರದೇಶಗಳಲ್ಲಿ ಗೋದಾಮುಗಳ ನಿರ್ಮಾಣ, ಕೊಯ್ಲು ನಂತರದ ಸಂಸ್ಕರಣೆ, ಕೃಷಿ ಉತ್ಪನ್ನಗಳನ್ನು ಸಾಗಾಣಿಕೆ ವ್ಯವಸ್ಥೆ ಕೃಷಿ ಪತ್ತಿನ ಸಹಕಾರ ಸಂಘಗಳು "ಬಹು ಉಪಯೋಗಿ ಸೇವಾ ಕೇಂದ್ರಗಳಾಗಿ" ಪರಿವರ್ತನೆಗೊಳ್ಳಲಿವೆ. ಈ ಯೋಜನೆಯಡಿ 1,549 ಸಹಕಾರ ಸಂಘಗಳು ಲಾಭ ಪಡೆಯಲಿದ್ದು, ಇದುವರೆಗೆ 215 ಪ್ಯಾಕ್ಸ್‌ಗಳನ್ನು ಸೇರ್ಪಡೆ ಮಾಡಲಾಗಿದೆ.

ಈ ನಿಟ್ಟಿನಲ್ಲಿ ಇತ್ತೀಚೆಗಷ್ಟೇ ಪ್ರಧಾನಮಂತ್ರಿಗಳಾದ ಶ್ರೀ ನರೇಂದ್ರ ಮೋದಿಯವರು ತಮ್ಮ ನೇರ ಸಂವಾದ ಕಾರ್ಯಕ್ರಮದಲ್ಲಿ ಹಾಸನ ಜಿಲ್ಲೆಯ ಉಗನೆ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಕಾರ್ಯದರ್ಶಿ ಶ್ರೀ ಬಸವೇಗೌಡರೊಂದಿಗೆ ನೇರ ಸಂವಾದ ನಡೆಸಿ ಸಂಘದ ಸಾಧನೆಗಳ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿರುವುದು ಹೆಮ್ಮೆಯ ವಿಷಯವಾಗಿದೆ ಮುಖ್ಯಮಂತ್ರಿಗಳು ಹೇಳಿದರು.

ಕೋವಿಡ್-19ರ ಸಂಕಷ್ಟದ ಸಂದರ್ಭದಲ್ಲಿ, ರೈತರಿಗೆ ಕೃಷಿ ಸಾಲ ಒದಗಿಸಲು ಕೇಂದ್ರ ಸರ್ಕಾರವು "Special Liquidity Facility" ಅಡಿಯಲ್ಲಿ ರೂ. 1,700 ಕೋಟಿಗಳನ್ನು ನಬಾರ್ಡ್ ಮೂಲಕ ಜಿಲ್ಲಾ

ಕೇಂದ್ರ ಸಹಕಾರ ಬ್ಯಾಂಕುಗಳಿಗೆ ನೀಡಲಾಗಿರುತ್ತದೆ. ಬೆಳೆ ಸಾಲಗಳ ಮೇಲಿನ ಬಡ್ಡಿ ಸಹಾಯಧನ ಯೋಜನೆಯಡಿ 2020–21ನೇ ಸಾಲಿನಲ್ಲಿ ಇಲ್ಲಿಯವರೆಗೆ 11.88 ಲಕ್ಷ ರೈತರಿಗೆ ರೂ. 7,777.41 ಕೋಟಿಗಳ ಸಾಲ ವಿತರಿಸಿದ್ದು, ಬಡ್ಡಿ ಸಹಾಯಧನಕ್ಕಾಗಿ ರೂ. 992.50 ಕೋಟಿಗಳ ಆಯವ್ಯಯ ಅವಕಾಶ ಕಲ್ಪಿಸಲಾಗಿದ್ದು, ಈಗಾಗಲೇ ಸರ್ಕಾರದಿಂದ ರೂ. 496.24 ಕೋಟಿ ಅನುದಾನ ಬಿಡುಗಡೆ ಮಾಡಲಾಗಿದೆ.

ಸಾಲಮನ್ನಾ ಯೋಜನೆ–2018 ಯೋಜನೆಯಡಿಯಲ್ಲಿ ರಾಜ್ಯದ 16.41 ಲಕ್ಷ ರೈತರಿಗೆ ರೂ. 7,637.32 ಕೋಟಿಗಳು ಬಿಡುಗಡೆಯಾಗಿದ್ದು, ನಮ್ಮ ಸರ್ಕಾರದ ಅವಧಿಯಲ್ಲಿ ರೂ. 5,092.32 ಕೋಟಿ ಬಿಡುಗಡೆ ಮಾಡಲಾಗಿದೆ. ಹೈನುಗಾರಿಕೆ ಮತ್ತು ಮೀನುಗಾರಿಕೆ ಉದ್ದೇಶಕ್ಕೆ ರೂ. 2 ಲಕ್ಷಗಳ ವರೆಗಿನ ಶೂನ್ಯ ಬಡ್ಡಿ ದರದಲ್ಲಿ ಸಾಲ ನೀಡುವ ಯೋಜನೆಯಡಿ ಈವರೆಗೆ ರೂ. 60.30 ಕೋಟಿಗಳ ಸಾಲ ವಿತರಿಸಲಾಗಿದೆ. ಸಹಕಾರ ಕ್ಷೇತ್ರದಲ್ಲಿ 2.50 ಲಕ್ಷ ಸ್ತ್ರೀಶಕ್ತಿ / ಸ್ವಸಹಾಯ ಗುಂಪುಗಳನ್ನು ರಚನೆ ಮಾಡಲಾಗಿದ್ದು, ಇಲ್ಲಿಯವರೆಗೆ 71,657 ಗುಂಪುಗಳಿಗೆ ರೂ. 1,421.83 ಕೋಟಿಗಳ ಸಾಲ ವಿತರಿಸಲಾಗಿದೆ.

'ಬಡವರ ಬಂಧು' ಯೋಜನೆಯಡಿಯಲ್ಲಿ ನಗರ ಪ್ರದೇಶಗಳಲ್ಲಿನ ಬೀದಿಬದಿ ವ್ಯಾಪಾರಿಗಳು ಮತ್ತು ಸಣ್ಣ ವ್ಯಾಪಾರಿಗಳಿಗೆ ಶೂನ್ಯ ಬಡ್ಡಿ ದರದಲ್ಲಿ ಕಿರುಸಾಲವನ್ನು ಒದಗಿಸಲಾಗುತ್ತಿದ್ದು, ಒಟ್ಟು 20,760 ಫಲಾನುಭವಿಗಳಿಗೆ ರೂ. 14.43 ಕೋಟಿಗಳ ಸಾಲ ವಿತರಿಸಲಾಗಿದೆ. ಇಂತಹ ಹತ್ತು ಹಲವು ಕಾರ್ಯಕ್ರಮಗಳ ಮೂಲಕ, ರಾಜ್ಯದ ಸಹಕಾರ ಸಂಸ್ಥೆಗಳು ಈ ವರ್ಷ ಸುಮಾರು ರೂ. 39,300 ಕೋಟಿ ರೂಪಾಯಿಗಳ ಆರ್ಥಿಕ ಸ್ಪಂದನ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ. ರಾಜ್ಯದ ಜನತೆಯ ಜೀವನವನ್ನು ಹಸನುಗೊಳಿಸುವ ಸಹಕಾರ ಕ್ಷೇತ್ರ ಉತ್ತರೋತ್ತರವಾಗಿ ಅಭಿವೃದ್ಧಿಯಾಗಲಿ ಎಂದರು.

ಇದೇ ಸಂದರ್ಭದಲ್ಲಿ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವ ಲಕ್ಷ್ಮಣ್ ಸವದಿ ಅವರು "ಸಹಕಾರ ವಿಶೇಷ ಸಂಚಿಕೆ" ಪುಸ್ತಕವನ್ನು ಬಿಡುಗಡೆ ಮಾಡಿದರು.

ಕಾರ್ಯಕ್ರಮದಲ್ಲಿ ಉಪ ಮುಖ್ಯಮಂತ್ರಿಗಳು, ಲೋಕೋಪಯೋಗಿ ಹಾಗೂ ಸಮಾಜ ಕಲ್ಯಾಣ ಸಚಿವ ಗೋವಿಂದ ಎಂ ಕಾರಜೋಳ, ಉಪ ಮುಖ್ಯಮಂತ್ರಿಗಳು, ಉನ್ನತ ಶಿಕ್ಷಣ ಹಾಗೂ ಐಟಿ ಹಾಗೂ ಬಿಟಿ ಸಚಿವ ಡಾ.ಸಿ.ಎನ್. ಅಶ್ವತ್ಥ್ ನಾರಾಯಣ್, ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವ ಲಕ್ಷ್ಮಣ್ ಸವದಿ ಹಾಗೂ ಸಚಿವರು, ಶಾಸಕರು ಸೇರಿದಂತೆ ಹಲವಾರು ಗಣ್ಯರು ಉಪಸ್ಥಿತರಿದ್ದರು.

# ಅರ್ಜಿ ಆಹ್ವಾನ

ಬೆಂಗಳೂರು, ಸೆಪ್ಟೆಂಬರ್ 16, (ಕರ್ನಾಟಕ ವಾರ್ತೆ) :

ಪರಿಶಿಷ್ಟ ಜಾತಿಯ ಅಲೆಮಾರಿ ಕೊರಮ-ಕೊರಚ (ಕುಳುವ) ಸಮುದಾಯದ ಮೇರು ವ್ಯಕ್ತಿಗಳಾದ (1) ಶ್ರೀ ಕುಶಲಾನಂದ ಯೋಗಿಯವರು, ಶರಣ ಪರಂಪರೆ 2)ಸುಪ್ರಸಿದ್ಧ ಶಹನಾಯಿ ವಾದಕ ಶ್ರೀ ಸನಾದಿ ಅಪ್ಪಣ್ಣರವರು 3)ಸ್ವಾತಂತ್ರ್ಯ ಹೋರಾಟಗಾರರ ಶ್ರೀ ವೀರ ಕನ್ನೇಶ್ವರ ರಾಮರವರು 4)ವಚನಗಾರ್ತಿ ಕಾಲಕಣ್ಣಿಕೆ ಕಾಮಮ್ಮನವರು/ಕೊರವಂಜಿ ರವರುಗಳ ಇತಿಹಾಸ, ಜೀವನ ಮತ್ತು ಹೋರಾಟದ ಚರಿತ್ರೆ ಮತ್ತು ವಸ್ತುನಿಷ್ಟವಾಗಿ ಅಧ್ಯಯನ/ ಸಂಶೋಧನಾ ವರದಿ 5) ಸಿಳ್ಳೇಕ್ಯಾತಾಸ್ ಸಮುದಾಯದ ಪರ್ಯಾಯ ಪದಗಳಾದ ಕಿಳ್ಳೇಕ್ಯಾತ, ಕಟಬು, ಕಟಬರ್, ಬುಂಡೆಬೆಸ್ತ, ಜಾಲಗಾರ್ ಜಾತಿಗಳ ಕುಲಶಾಸ್ತ್ರೀಯ ಅಧ್ಯಯನ. 6) ಕೊರಮ ಸಮುದಾಯದ ಪರ್ಯಾಯ ಪದಗಳಾದ ಎರ್‌ಕಲ, ಇರಕಲ, ಕೈಕಾಡಿ, ಕೊರಗಾರ್, ಕೊರಮ್‌ಶೆಟ್ಟಿ, ಕುಂಜಿ, ಕೊರ್ವಾರಿ, ಎರುಕುಲ ಸಮುದಾಯಗಳ ಕುಲಶಾಸ್ತ್ರೀಯ ಅಧ್ಯಯನ.

ಮೇಲ್ಕಂಡ ಇತಿಹಾಸಕಾರರ ಹಾಗೂ ಸಮುದಾಯಗಳ ಕುಲಶಾಸ್ತ್ರೀಯ ಅಧ್ಯಯನ ಕಾರ್ಯ ಕೈಗೊಳ್ಳಲು ಅರ್ಹ ಆಸಕ್ತರಿಂದ ಸಂಸ್ಥೆಯ ಷರತ್ತು ಹಾಗೂ ನಿಬಂಧನೆಗೊಳಪಟ್ಟು ಅರ್ಜಿ ಆಹ್ವಾನಿಸಲಾಗಿದೆ. ಷರತ್ತು ಮತ್ತು ನಿಬಂಧನೆಗಳು ಹಾಗೂ ಅರ್ಜಿಯನ್ನು ಕಛೇರಿ ವೇಳೆಯಲ್ಲಿ ಖುದ್ದಾಗಿ ಬಂದು ಅಥವಾ ದೂರವಾಣಿಯ ಮೂಲಕ ಕರೆ ಮಾಡಿ ಇ-ಮೇಲ್ ಮೂಲಕ ಪಡೆದುಕೊಂಡು, ಷರತ್ತು ಮತ್ತು ನಿಭಂದನೆಗಳನ್ನು ಒಪ್ಪಿದ ನಂತರ ಆಸಕ್ತರು ನಿರ್ದೇಶಕರು, ಡಾ.ಬಿ.ಆರ್.ಅಂಬೇಡ್ಕರ್ ಸಂಶೋಧನಾ ಸಂಸ್ಥೆ, ಬೆಂಗಳೂರು ರವರಿಗೆ ಪತ್ರಿಕೆಯಲ್ಲಿ ಪ್ರಕಟಣೆಗೊಂಡ ದಿನಾಂಕದಿಂದ 30 ದಿವಸಗಳೊಳಗೆ ಅರ್ಜಿ ಸಲ್ಲಿಸತಕ್ಕದ್ದು. ನಿಗಧಿತ ಅವಧಿಯ ನಂತರ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಪ್ರತಿ ಸಂಶೋಧನೆಗೆ ರೂ. 3.50 ಲಕ್ಷಗಳನ್ನು ನಿಗಧಿಪಡಿಸಿದೆ. ದೂರವಾಣಿ ಸಂಖ್ಯೆ: 080-222048211, ಮೊಬೈಲ್ ಸಂ: 9740401417, 9341774015 ಎಂದು ಯೋಜನಾಧಿಕಾರಿ, ಡಾ.ಬಿ.ಆರ್.ಅಂಬೇಡ್ಕರ್ ಸಂಶೋಧನಾ ಸಂಸ್ಥೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಚಿವರ ಪ್ರವಾಸ

ಬೆಂಗಳೂರು, ಸೆಪ್ಟೆಂಬರ್ 16, (ಕರ್ನಾಟಕ ವಾರ್ತೆ) :

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವ ಎಸ್. ಸುರೇಶ್‌ಕುಮಾರ್ ಅವರು ಸೆಪ್ಟೆಂಬರ್ 18 ರಂದು ಮೈಸೂರು ಹಾಗೂ ಚಾಮರಾಜನಗರ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಂಡು ಅಂದೇ ರಾತ್ರಿ ಕೇಂದ್ರಸ್ಥಾನಕ್ಕೆ ಹಿಂತಿರುಗುವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಸಚಿವ ಸುರೇಶ್ ಕುಮಾರ್ ಆಶಯದಂತೆ ಚೌಕಾಬಾರ ಬಿಟ್ಟು ಪತ್ರಿಕೆ ಓದುತ್ತಿರುವ ವಾಹನ ಚಾಲಕರು

**ಬೆಂಗಳೂರು, ಸೆಪ್ಟೆಂಬರ್ 16, (ಕರ್ನಾಟಕ ವಾರ್ತೆ) :**

ರಾಜ್ಯ ಸರ್ಕಾರದ ವಿವಿಧ ಇಲಾಖೆಗಳ ಕಚೇರಿಗಳು, ನಿರ್ದೇಶನಾಲಯಗಳು, ಅಕಾಡೆಮಿಗಳಿರುವ ನಗರದ ಅಂಬೇಡ್ಕರ್ ವೀಧಿಯ ವಿಶ್ವೇಶ್ವರಯ್ಯ ಟವರ್ಸ್ ಆವರಣದಲ್ಲಿ ಮುಖ್ಯದ್ವಾರದ ಸನಿಹದಲ್ಲಿ ನಿತ್ಯವೂ ವಿರಾಮದ ಸಮಯದಲ್ಲಿ ಚೌಕಾಬಾರ ಆಡುತ್ತಾ ಕುಳಿತಿರುತ್ತಿದ್ದ ವಿವಿಧ ಅಧಿಕಾರಿಗಳ ಕಾರು ಚಾಲಕರಿಗೆ ಅನುಕೂಲವಾಗುವಂತೆ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವ ಎಸ್. ಸುರೇಶ್ ಕುಮಾರ್ ಸೂಚನೆ ಮೇರೆಗೆ ಗ್ರಂಥಾಲಯ ಇಲಾಖೆಯಿಂದ ಪತ್ರಿಕೆಗಳನ್ನು ಒದಗಿಸಲಾಗಿದೆ.

ಇತ್ತೀಚಿಗೆ ವಿಶ್ವೇಶ್ವರಯ್ಯ ಟವರ್ಸ್ ನ 4ನೇ ಮಹಡಿಯಲ್ಲಿರುವ ಗ್ರಂಥಾಲಯ ಇಲಾಖೆ ಕಚೇರಿಯಲ್ಲಿನ ಸಭೆಗೆ ಆಗಮಿಸಿದ್ದ ಪ್ರಾಥಮಿಕ ಸುರೇಶ್ ಕುಮಾರ್ ಭೇಟಿ ನೀಡಿ ಸಭೆ ಮುಗಿಸಿ ಹೊರಬಂದು ಕಾರಿನಲ್ಲಿ ತೆರಳುತ್ತಿದ್ದರು. ಆಗ ಎಡಗಡೆ ಕಣ್ಣು ಹಾಯಿಸಿದಾಗ ಹತ್ತಾರು ಮಂದಿ ಗುಂಪೂಗೂಡಿದ್ದನ್ನು ನೋಡಿ ಕಾರಿನಿಂದ ಇಳಿದು ಸ್ಥಳಕ್ಕೆ ಭೇಟಿ ನೀಡಿದರು. ಆಗ ಕಾರು ಚಾಲಕರೆಲ್ಲ ಚೌಕಾಬಾರ ಆಡುವುದರಲ್ಲಿ ತೊಡಗಿದ್ದರು. ಕಾರು ಚಾಲಕರು ಚೌಕಾಬಾರ ಆಡುವುದನ್ನು ಗಮನಿಸಿ ಅವರನ್ನು ಮಾತನಾಡಿಸಿದ ಸಚಿವರು ಗ್ರಂಥಾಲಯ ಇಲಾಖೆ ನಿರ್ದೇಶಕರನ್ನು ಕರೆದು, ಚಾಲಕರಿಗೆ ವಿರಾಮ ದೊರೆತಾಗ ಓದಲು ಅನುಕೂಲವಾಗುವಂತೆ ಈ ಸ್ಥಳಕ್ಕೆ ಪತ್ರಿಕೆಗಳನ್ನು ಪೂರೈಸಲು ಸೂಚಿಸಿದರು.

ಸಚಿವರ ನಿರ್ದೇಶನದಂತೆ ಗ್ರಂಥಾಲಯ ಇಲಾಖೆ ನಿರ್ದೇಶಕರು ಚಾಲಕರು ಚೌಕಾಬಾರ ಆಡುತ್ತಿದ್ದ ಸ್ಥಳಕ್ಕೆ ಪತ್ರಿಕೆಗಳನ್ನು ಪೂರೈಸಿದ್ದು, ಚಾಲಕರೆಲ್ಲ ಚೌಕಾಬಾರ ಆಟದ ಬದಲಿಗೆ ಪತ್ರಿಕೆ ಓದುವುದರಲ್ಲಿ ಮಗ್ನರಾಗಿದ್ದಾರೆ. ತಮಗೆಲ್ಲ ಪತ್ರಿಕೆ ಒದಗಿಸಲು ಸೂಚಿಸಿರುವುದಕ್ಕೆ ಚಾಲಕರು ಸುರೇಶ್ ಕುಮಾರ್ ಅವರಿಗೆ ಕೃತಜ್ಞತೆ ಸಲ್ಲಿಸಿದ್ದಾರೆ. ಈಗ ಚೌಕಾಬಾರ ಆಡುವ ಸ್ಥಳ ವಾಚಾನಾಲಯವಾಗಿ ಮಾರ್ಪಟ್ಟಿದೆ ಎಂದು ಚಾಲಕರು ಖುಷಿ ವ್ಯಕ್ತಪಡಿಸಿದ್ದಾರೆ.

## ವಿದ್ಯಾರ್ಥಿಗಳಿಗೆ ರಿಯಾಯಿತಿ ದರದಲ್ಲಿ ಪಾಸು

**ಬೆಂಗಳೂರು, ಸೆಪ್ಟೆಂಬರ್ 16, (ಕರ್ನಾಟಕ ವಾರ್ತೆ) :**

ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯು ವಿದ್ಯಾರ್ಥಿ ಸಮುದಾಯದ ಹಿತವನ್ನು ಗಮನದಲ್ಲಿಟ್ಟುಕೊಂಡು ರಿಯಾಯಿತಿ ದರದಲ್ಲಿ ವಿದ್ಯಾರ್ಥಿ ರಿಯಾಯಿತಿ ಪಾಸುಗಳನ್ನು ವಾಸಸ್ಥಳದಿಂದ ಕಾಲೇಜಿಗೆ ಪ್ರಯಾಣಿಸಲು ಅವಕಾಶ ಕಲ್ಪಿಸಿ ವಿತರಣೆ ಮಾಡುತ್ತಿದೆ.

ಮುಂದುವರೆದು, ಸಂಸ್ಥೆಯು ಎಸ್.ಎಸ್.ಎಲ್.ಸಿ ಪೂರಕ ಪರೀಕ್ಷೆಗೆ ಹಾಜರಾಗುತ್ತಿರುವ ವಿದ್ಯಾರ್ಥಿಗಳ ಹಿತವನ್ನು ಗಮನದಲ್ಲಿಟ್ಟುಕೊಂಡು ದಿನಾಂಕ:21.09.2020 ರಿಂದ 28.09.2020 ರವರೆಗೆ ಪರೀಕ್ಷಾ ದಿನಾಂಕಗಳಂದು ವಾಸಸ್ಥಳದಿಂದ ಪರೀಕ್ಷಾ ಕೇಂದ್ರದವರೆಗೆ ಎಸ್.ಎಸ್.ಎಲ್.ಸಿ ಪರೀಕ್ಷಾ ಪ್ರವೇಶ ಪತ್ರ (ಅಡ್ಮೀಷನ್ ಟಿಕೇಟ್) ಅಥವಾ 2019–20ನೇ ಸಾಲಿನ ವಿದ್ಯಾರ್ಥಿ ಪಾಸನ್ನು ತೋರಿಸಿ ಬೆಂ.ಮ.ಸಾ.ಸಂಸ್ಥೆಯ ಸಾಮಾನ್ಯ ಸೇವೆಗಳಲ್ಲಿ ಉಚಿತವಾಗಿ ಪ್ರಯಾಣಿಸಲು ಅವಕಾಶ ಕಲ್ಪಿಸಲಾಗಿದೆ.

## Concessional bus passes for Students

Bengaluru Sept 16 (Karnataka Information)

**For the benefit of student community BMTC is issuing student concessional passes to travel from their residence to college at a concessional rate.**

**Further SSLC Supplementary exams are being conducted from 21.09.2020 to 28.09.2020. In view of the same BMTC has extended free travel facility to all SSLC supplementary exams students from their residence to the examination center on production of exam Hall/admission ticket or Student pass (Issued in the year 2019-20)**

## ವಿದ್ಯಾರ್ಥಿಗಳಿಗೆ ಕೆ.ಎಸ್.ಆರ್.ಟಿ.ಸಿ. ಬಸ್ಸಿನಲ್ಲಿ ಉಚಿತವಾಗಿ ಪ್ರಯಾಣಿಸಲು ಅನುಮತಿ

**ಬೆಂಗಳೂರು, ಸೆಪ್ಟೆಂಬರ್ 16, (ಕರ್ನಾಟಕ ವಾರ್ತೆ) :**

**ಎಸ್.ಎಸ್.ಎಲ್.ಸಿ ಪೂರಕ ಪರೀಕ್ಷೆಗಳು ದಿನಾಂಕ 21–09–2020 ರಿಂದ 28–09–2020 ರವರೆಗೆ ನಡೆಯಲಿರುವುದರಿಂದ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ, ಕ.ರಾ.ರ.ಸಾ.ನಿಗಮವು, ಎಸ್.ಎಸ್.ಎಲ್.ಸಿ ಪೂರಕ ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳಿಗೆ ತಮ್ಮ ವಾಸಸ್ಥಳದಿಂದ ನಿಯೋಜಿತ ಪರೀಕ್ಷಾ ಕೇಂದ್ರದವರೆಗೆ ಹೋಗುವಾಗ ಮತ್ತು ಹಿಂದಿರುಗುವಾಗ "ಎಸ್.ಎಸ್.ಎಲ್.ಸಿ ಪೂರಕ ಪರೀಕ್ಷೆ ಪ್ರವೇಶ ಪತ್ರವನ್ನು" ತೋರಿಸಿ, ನಿಗಮದ ನಗರ, ಹೊರವಲಯ, ಸಾಮಾನ್ಯ ಹಾಗೂ ವೇಗದೂತ ಬಸ್ಸುಗಳಲ್ಲಿ ಉಚಿತವಾಗಿ ಪ್ರಯಾಣಿಸಲು ಅವಕಾಶ ಕಲ್ಪಿಸಿದೆ.**

## Free bus passes for Students

Bengaluru Sept 16 (Karnataka Information)

**To facilitate SSLC students who are appearing for supplementary exams. KSRTC has decided to allow these students to travel free in its buses (City, suburban, Ordinary and Express buses) between their Residence and allotted Examination Centers on production of Admission ticket during the examination period from 21.09.2020 to 28.09.2020.**

## ಸಾಂಸ್ಕೃತಿಕ ಭವನ

**ಬೆಂಗಳೂರು, ಸೆಪ್ಟೆಂಬರ್ 16, (ಕರ್ನಾಟಕ ವಾರ್ತೆ) :**

**ಹಲವು ದಿನಗಳಿಂದ ನೆನೆಗುದಿಗೆ ಬಿದ್ದಿರುವ ಸಾಂಸ್ಕೃತಿಕ ಭವನ ನಿರ್ಮಿಸಲು ಪ್ರತಿ ಜಿಲ್ಲೆಗಳಲ್ಲೂ ನಿವೇಶನ ಗುರುತಿಸಿ ಕಾಮಗಾರಿ ಆರಂಭಿಸಲು ತ್ವರಿತ ಕ್ರಮ ಕೈಗೊಳ್ಳಬೇಕೆಂದು ಕನ್ನಡ ಮತ್ತು ಸಂಸ್ಕತಿ, ಯುವಜನ ಸಬಲೀಕರಣ ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವ ಸಿ.ಟಿ.ರವಿ ಅವರು ಜಿಲ್ಲಾಧಿಕಾರಿಗಳಿಗೆ ಸೂಚಿಸಿದರು.**

ಬುಧವಾರ ಚಿಕ್ಕಮಗಳೂರಿನಿಂದ ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು, ಇಲಾಖೆಯ ಕಾರ್ಯದರ್ಶಿಗಳು, ಸಹಾಯಕ ನಿರ್ದೇಶಕರುಗಳು ಸೇರಿದಂತೆ ಮೂರು ಇಲಾಖೆಯ ಅಧಿಕಾರಿಗಳ ಜೊತೆ ವಿಡಿಯೋ ಕಾನ್ಫರೆನ್ಸ್ ನಡೆಸಿದ ಅವರು, ಈಗಾಗಲೇ ಸಾಕಷ್ಟು ವಿಳಂಬವಾಗಿದ್ದು ಮತ್ತೆ ತಡಮಾಡದೆ, ಪ್ರತಿ ಜಿಲ್ಲೆಗಳಲ್ಲೂ ಸಾಂಸ್ಕೃತಿಕ ಭವನ ನಿರ್ಮಾಣ ಮಾಡಲು ನಿವೇಶನಗಳನ್ನು ಗುರುತಿಸಿ, ಕಟ್ಟಡ ಕಾಮಗಾರಿ ಆರಂಭಿಸಬೇಕೆಂದು ನಿರ್ದೇಶನ ನೀಡಿದರು.

ಸಾಂಸ್ಕತಿಕ ಭವನ ನಿರ್ಮಾಣ ಮಾಡಲು, ಸರ್ಕಾರ ಈಗಾಗಲೇ ಅನುದಾನ ಬಿಡುಗಡೆ ಮಾಡಿದೆ. ರಾಮನಗರ, ತುಮಕೂರು, ಶಿವಮೊಗ್ಗ, ಚಿತ್ರದುರ್ಗ, ದಾವಣಗೆರೆ, ಮಂಡ್ಯ , ಕೊಡುಗು, ಚಾಮರಾಜನಗರ, ದಕ್ಷಿಣ ಕನ್ನಡ, ಚಿಕ್ಕಮಗಳೂರು, ಉಡುಪಿ , ಬೆಳಗಾವಿ, ಉತ್ತರಕನ್ನಡ, ವಿಜಯಪುರ, ಹಾವೇರಿ ಗದಗ, ಬಾಗಲಕೋಟೆ, ಕಲ್ಬುರ್ಗಿ ಮತ್ತು ಯಾದಗಿರಿ ಸೇರಿದಂತೆ ಮತ್ತಿತರ ಜಿಲ್ಲೆಗಳಲ್ಲಿ ಒಂದು ತಿಂಗಳೊಳಗೆ ಕಾಮಗಾರಿ ಆರಂಭವಾಗಬೇಕು ಎಂದು ಹೇಳಿದರು. ಕಟ್ಟಡದ ಕಾಮಗಾರಿ ದೀರ್ಘ ಕಾಲದವರೆಗೆ ಬಳಕೆ ಆಗುವಂತೆ ಉತ್ಕೃಷ್ಟ ಗುಣಮಟ್ಟ ಕಾಪಾಡಿಕೊಳ್ಳಬೇಕು. ಎಲ್ಲಾದರೂ ಕಳಪೆ ಕಂಡು ಬಂದರೆ ಅದಕ್ಕೆ ಸಂಬಂಧಪಟ್ಟ ಅಧಿಕಾರಿಗಳನ್ನೆ ಹೊಣೆಗಾರರಾಗಿ ಮಾಡಲಾಗುತ್ತದೆ ಎಂದು ಎಚ್ಚರಿಸಿದರು. ಸಾಂಸ್ಕೃತಿಕ ಭವನದ ಜೊತೆಗೆ ರಂಗಮಂದಿರಗಳು ಇಲ್ಲದೆ ಇರುವ ಬೆಂಗಳೂರು ಗ್ರಾಮಾಂತರ, ರಾಮನಗರ, ಕೊಡುಗು, ಉಡುಪಿ, ಧಾರವಾಡ, ಹಾವೇರಿ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿ 2–5 ಎಕರೆ ನಿವೇಶನ ಗುರುತಿಸಿ ಕೆಲಸ ಆರಂಭಿಸುವಂತೆ ಜಿಲ್ಲಾಧಿಕಾರಿಗಳಿಗೆ ನಿರ್ದೇಶನ ನೀಡಿದರು. ಜೊತೆಗೆ ಯಾದಗಿರಿ, ಚಿಕ್ಕಬಳ್ಳಾಪುರ, ಕೊಪ್ಪಳ, ದಾವಣಗೆರೆ, ಚಾಮರಾಜನಗರ, ಗದಗ ಹಾಗೂ ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಅಪೂರ್ಣಗೊಂಡಿರುವ ಜಿಲ್ಲಾ ರಂಗಮಂದಿರಗಳನ್ನು ಕಾಲಮಿತಿಯೊಳಗೆ ಪೂರ್ಣಗೊಳಿಸಬೇಕು ಎಂದು ತಿಳಿಸಿದರು.

ಗಡಿ ಪ್ರದೇಶಾಭಿವೃದ್ಧಿ ಪ್ರಾಧಿಕಾರದಿಂದ ನಿರ್ಮಿಸಲಾಗುತ್ತಿರುವ ತುಳು ಭವನ, ಬ್ಯಾರಿ ಭವನ ಹಾಗೂ ಕನ್ನಡ ಭವನಗಳನ್ನು ಆದಷ್ಟು ಶೀಘ್ರ ನಿರ್ಮಾಣ ಮಾಡಿ ಕಾರ್ಯಾರಂಭಿಸಲು ಕ್ರಮ ಕೈಗೊಳ್ಳಬೇಕು. ಪ್ರಸಕ್ತ ಸಾಲಿನ ಬಜೆಟ್‌ನಲ್ಲಿ ಘೋಷಿಸಿರುವ ಸಂತ ಶಿಶುನಾಳ ಶರೀಫರ ಹುಟ್ಟೂರು ಹಾಗೂ ಖ್ಯಾತ ಸಾಹಿತಿ ಎಸ್.ಎಲ್.ಭೈರಪ್ಪನವರ ಜನ್ಮಸ್ಥಳ ಅಭಿವೃದ್ಧಿಗೆ ಕ್ರಿಯಾಯೋಜನೆ ರೂಪಿಸಬೇಕೆಂದು ಸಿ.ಟಿ.ರವಿ ಸೂಚಿಸಿದರು.

ಪ್ರತಿ ಜಿಲ್ಲೆಗಳಲ್ಲೂ ಪ್ರವಾಸೋದ್ಯಮ ಉತ್ತೇಜಿಸಲು ಸಾಕಷ್ಟು ವಿಫುಲ ಅವಕಾಶಗಳಿವೆ. ಹೀಗಾಗಿ ಇನ್ನು ಮುಂದೆ ಎಲ್ಲಾ ಜಿಲ್ಲಾಧಿಕಾರಿಗಳು ಕಡ್ಡಾಯವಾಗಿ ಜಿಲ್ಲಾ ಪ್ರವಾಸಿ ತಾಣಗಳ ಸಮಗ್ರ ಮಾಹಿತಿಯುಳ್ಳ ಕೈಪಿಡಿಯನ್ನು ಹೊಂದಿರಲೇಬೇಕು. ವೆಬ್‌ಸೈಟ್, ಸಾಮಾಜಿಕ ಜಾಲತಾಣಗಳಲ್ಲಿ ಜಿಲ್ಲಾ ಪ್ರವಾಸಿ ತಾಣಗಳ ಮಾಹಿತಿಯನ್ನು ಕಾಲ ಕಾಲಕ್ಕೆ ನವೀಕರಿಸುತ್ತಿರಬೇಕು ಎಂದು ಆದೇಶಿಸಿದರು.

ಜಿಲ್ಲಾಧಿಕಾರಿಗಳು, ಜಿಲ್ಲಾ ಪ್ರವಾಸೋದ್ಯಮ ಅಧಿಕಾರಿಗಳು ತಮ್ಮ ತಮ್ಮ ಫೇಸ್‌ಬುಕ್, ಟ್ವಿಟರ್ ಅಕೌಂಟ್‌ಗಳನ್ನು ರಾಜ್ಯ ಪ್ರವಾಸೋದ್ಯಮ ಖಾತೆಗೆ ಟ್ಯಾಗ್ ಮಾಡಬೇಕು, ವೆಬ್‌ಸೈಟ್, ಸೋಶಿಯಲ್ ಮೀಡಿಯಾದಲ್ಲಿ ಬರುವ ವಿಷಯಗಳನ್ನು ಪ್ರತಿಯೊಬ್ಬರು ಹಂಚಿಕೊಳ್ಳಬೇಕು ಎಂದು ಸಲಹೆ ಮಾಡಿದರು.

ಪ್ರತಿ ಜಿಲ್ಲೆಯಲ್ಲೂ ಸ್ಥಳೀಯ ಶಾಸಕರನ್ನೊಳಗೊಂಡ ಜಿಲ್ಲಾ ಮಟ್ಟದ ಟಾಸ್ಕ್ ಪೋರ್ಸ್ (ಕಾರ್ಯಪಡೆ) ರಚಿಸುವುದು, ಜಿಲ್ಲೆಗಳಲ್ಲಿ ಪ್ರವಾಸಿ ತಾಣಗಳ ಪೋಟೋ, ವಿಡಿಯೋ ಕ್ಲಿಪಿಂಗ್ ತಯಾರಿಸಿ, ಇಲಾಖೆಗೆ ಕಳುಹಿಸಿಕೊಡಬೇಕೆಂದು ಎಂದು ಮನವಿ ಮಾಡಿದರು.

ಜಿಲ್ಲಾ ಮಟ್ಟದಲ್ಲಿ ಪ್ರತಿ ವರ್ಷ ಉತ್ಸವಗಳು, ಮೇಳಗಳನ್ನು ಆಚರಣೆ ಮಾಡಲಾಗುತ್ತದೆ. ದೇಶ, ವಿದೇಶಗಳಿಂದ ಪ್ರವಾಸಿಗರನ್ನು ಆಕರ್ಷಿಸಲು ಸಮಗ್ರ ಮಾಹಿತಿಯನ್ನೊಳಗೊಂಡ ವಾರ್ಷಿಕ ಕ್ಯಾಲೆಂಡರ್ ತಯಾರಿಸಬೇಕು, ಕೆಲವು ಕಡೆ ಪ್ರವಾಸೋದ್ಯಮ ಇಲಾಖೆಗೆ ಸೇರಿದ ಜಮೀನನ್ನು ಖಾಸಗಿಯವರು ಕಬಳಿಸುತ್ತಿರುವುದು ನನ್ನ ಗಮನಕ್ಕೆ ಬಂದಿದೆ. ಇನ್ನು ಕೆಲವು ಕಡೆ ಆರ್.ಟಿ.ಸಿ , ಇನ್ನು ಕೆಲವೆಡೆ ಸಮೀಕ್ಷೆಗಳೇ ನಡೆದಿಲ್ಲ. ತಕ್ಷಣವೇ ಇದನ್ನು ಪೂರ್ಣಗೊಳಿಸಬೇಕು ಹಾಗೂ ಜಿಲ್ಲಾಧಿಕಾರಿಗಳೇ ಜಮೀನು ರಕ್ಷಣೆಯ ಹೊಣೆ ಹೊರಬೇಕು ಎಂದು ಎಚ್ಚರಿಸಿದರು.

ಪ್ರತಿ ಜಿಲ್ಲೆಗಳಲ್ಲೂ ಕನಿಷ್ಟ ಎರಡು ತಾಣಗಳನ್ನು ಅಂತಾರಾಷ್ಟ್ರೀಯ ಮಟ್ಟಕ್ಕೆ ಅಭಿವೃದ್ಧಿಪಡಿಸುವುದು, ಅತ್ಯುತ್ತಮವಾಗಿ ಕೆಲಸ ಮಾಡಿದ ಜಿಲ್ಲಾಧಿಕಾರಿಗೆ ಪುರಸ್ಕಾರ ಮಾಡಲಾಗುವುದು. ಕೆಲವು ಕಡೆ ಕಾಮಗಾರಿಗಳಿಗೆ

ಬೇಕಾಬಿಟ್ಟಿ ಅಂದಾಜು ಪಟ್ಟಿಗೆ ಕಣ್ಣುಮುಚ್ಚಿ ಅನುಮೋದನೆ ನೀಡಲಾಗಿದೆ. ಇದನ್ನು ನಾನು ಸಹಿಸುವುದಿಲ್ಲ ಎಂದು ಆಕ್ಷೇಪಿಸಿದರು.

ಯಾತ್ರಿ ನಿವಾಸಕ್ಕೆ ಲಿಂಟಲ್‌ವರೆಗೂ ಮಾತ್ರ ತಯಾರಿಸಲಾದ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಆದರೆ ಮತ್ತೆ ಹೆಚ್ಚುವರಿ ಮೊತ್ತಕ್ಕೆ ಮುಂದುವರೆದ ಕಾಮಗಾರಿಯಾಗಿ ಬೇಡಿಕೆ ಬಂದಿದೆ. ಯುಸಿ ನೀಡಿರುವುದನ್ನು ಪರಿಶೀಲಿಸದೆ ಹೆಚ್ಚುವರಿ ಅನುದಾನ ಬೇಡಿಕೆ ಸಲ್ಲಿಸುವುದು ಎಷ್ಟರಮಟ್ಟಿಗೆ ಸರಿ ಎಂದು ಪ್ರಶ್ನಿಸಿದರು. ಯಾತ್ರಿ ನಿವಾಸ, ಶೌಚಾಲಯ, ಹೋಟೆಲ್ ಇತ್ಯಾದಿ ಕಟ್ಟಡಗಳನ್ನು ಇಲಾಖೆಯ ಅನುದಾನದಲ್ಲಿ ನಿರ್ಮಾಣ ಮಾಡಲಾಗಿದೆ. ಆದರೆ ಇದರ ಬಗ್ಗೆ ಸರಿಯಾದ ಲೆಕ್ಕ ಪರಿಶೋಧನೆಯಾಗದಿರುವುದಕ್ಕೆ ಆಕ್ಷೇಪಗಳು ಬಂದಿವೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಕಾಮಗಾರಿಗಳು ಮುಕ್ತಾಯವಾದರೂ ಅದನ್ನು ಸರಿಯಾದ ಸಮಯಕ್ಕೆ ಹಸ್ತಾಂತರ ಮಾಡದೆ ಇರುವ ಬಗ್ಗೆಯೂ ಸಚಿವರು ಜಿಲ್ಲಾಧಿಕಾರಿಗಳ ಗಮನ ಸೆಳೆದರು. ಜಿಲ್ಲೆಗಳಲ್ಲಿರುವ ಪ್ರವಾಸಿ ಆಪರೇಟರ್ಸ್ , ಟ್ಯಾಕ್ಸಿ ಸೇವೆ, ಆಸ್ಪತ್ರೆ, ರೆಸಾರ್ಟ್, ಹೋಂ ಸ್ಟೇ ಅವರುಗಳೊಂದಿಗೆ ಕಾಲಕಾಲಕ್ಕೆ ಚರ್ಚಿಸಬೇಕು ಎಂದು ಹೇಳಿದರು. ಇದೇ ವೇಳೆ ಸಚಿವ ರವಿ ಅವರು ಬಾಗಲಕೋಟೆ, ಬಳ್ಳಾರಿ, ಬೆಂಗಳೂರುನಗರ, ಬೆಳಗಾವಿ, ಬೀದರ್, ಚಾಮರಾಜನಗರ, ಚಿಕ್ಕಬಳ್ಳಾಪುರ, ದಾವಣಗೆರೆ, ಚಿಕ್ಕಬಳ್ಳಾಪುರ, ಚಿತ್ರದುರ್ಗ, ದಕ್ಷಿಣ ಕನ್ನಡ, ಧಾರವಾಡ, ಗದಗ, ಹಾಸನ, ಹಾವೇರಿ, ಕಲ್ಬುರ್ಗಿ, ಕೊಡುಗು, ಕೋಲಾರ, ಕೊಪ್ಪಳ, ಮೈಸೂರು, ರಾಯಚೂರು, ರಾಮನಗರ, ಶಿವಮೊಗ್ಗ, ಉಡುಪಿ, ವಿಜಯಪುರ, ಉತ್ತರಕನ್ನಡ, ಯಾದಗಿರಿ ಮತ್ತಿತರ ಕಡೆ ಕ್ರೀಡಾಂಗಣ ನಿರ್ಮಾಣ ಮಾಡಲು ಮುಂದಾಗಬೇಕು.
ಜಿಲ್ಲಾ ಕೇಂದ್ರಗಳಲ್ಲಿ ಹೊರಾಂಗಣ ಕ್ರೀಡಾಂಗಣ, ಒಳಾಂಗಣ ಕ್ರೀಡಾಂಗಣ, ಈಜುಕೊಳ ಮತ್ತಿತರ ಕ್ರೀಡಾ ಮೂಲಸೌಕರ್ಯಗಳಿಗಾಗಿ ಕನಿಷ್ಟ 12ರಿಂದ 20 ಎಕರೆ ಹಾಗೂ ತಾಲ್ಲೂಕು ಕೇಂದ್ರಗಳಲ್ಲಿ 4ರಿಂದ 6 ಎಕರೆ ನಿವೇಶನ ಗುರುತಿಸುವಂತೆ ಸೂಚನೆ ಕೊಟ್ಟರು.
2013–14ರಿಂದ 2018–19ರ ಅವಧಿಯಲ್ಲಿ 1567 ಫಲಾನುಭವಿಗಳಿಗೆ ಟ್ಯಾಕ್ಸಿ ವಿತರಿಸುವುದು ಬಾಕಿ ಉಳಿದಿದೆ. ನಾನು ಹಲವು ಜಿಲ್ಲೆಗಳಿಗೆ ಭೇಟಿ ಕೊಟ್ಟಾಗಲೂ ನನ್ನ ಗಮನಕ್ಕೆ ಬಂದಿದೆ. ಡಿಸೆಂಬರ್ ಒಳಗೆ

ಅರ್ಹ ಫಲಾನುಭವಿಗಳನ್ನು ಗುರುತಿಸಿ ವಿತರಣೆ ಮಾಡಲೇಬೇಕು. ಇಲ್ಲಸಲ್ಲದ ನೆಪ ಹೇಳಬೇಡಿ ಎಂದು ಕಿಡಿಕಾರಿದರು.

*ಅಧಿಸೂಚನೆ ಹೊರಡಿಸಿ*

ಪುರತತ್ವ ಇಲಾಖೆಗೆ ಸೇರಿದ ಒಟ್ಟು 321 ನಿವೇಶನಗಳಿದ್ದು, ಯಾವ ಕಾರಣಕ್ಕಾಗಿ ಅಧಿಸೂಚನೆ ಹೊರಡಿಸಿಲ್ಲ ಎಂದು ಸಚಿವ ರವಿ ಅವರು ಜಿಲ್ಲಾಧಿಕಾರಿಗಳನ್ನು ಪ್ರಶ್ನಿಸಿದರು. ಹಾವೇರಿ ಜಿಲ್ಲೆಯಲ್ಲಿ 121 ಪುರತತ್ವ ಇಲಾಖೆಗೆ ಸೇರಿದ ನಿವೇಶನಗಳಿವೆ. ಎರಡು ತಿಂಗಳೊಳಗೆ ಎಲ್ಲಾ ನಿವೇಶಗಳ ಅಧಿಸೂಚನೆ ಹೊರಡಿಸಬೇಕೆಂದು ಕಟ್ಟುನಿಟ್ಟಿನ ಸೂಚನೆ ಕೊಟ್ಟರು.

## ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಸಂಯೋಜನೆವಾರು ಹೆಚ್ಚು ಅಂಕಪಡೆದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ

**ಬೆಂಗಳೂರು, ಸೆಪ್ಟೆಂಬರ್ 16, (ಕರ್ನಾಟಕ ವಾರ್ತೆ) :**

ಕೇಂದ್ರ ಮಾನವ ಸಂಪನ್ಮೂಲ ಅಭಿವೃದ್ಧಿ ಮಂತ್ರಾಲಯ (**M.H.R.D**), ಉನ್ನತ ಶಿಕ್ಷಣ ಇಲಾಖೆ, ಕೇಂದ್ರ ಸರ್ಕಾರ, ನವದೆಹಲಿ ಇವರ ವತಿಯಿಂದ 2020ರಲ್ಲಿ ನಡೆದ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಸಂಯೋಜನೆವಾರು **Top 20$^{th}$ Percentile or 80$^{th}$ Percentile**ಗಿಂತ ಹೆಚ್ಚು ಅಂಕಗಳಿಸಿದ ಹಾಗೂ ತಮ್ಮ ವಿದ್ಯಾಭ್ಯಾಸವನ್ನು ಕಡ್ಡಾಯವಾಗಿ ಉನ್ನತ ಶಿಕ್ಷಣದಲ್ಲಿ ಮುಂದುವರಿಸಿರುವಂತಹ(ಕನಿಷ್ಠ 03 ವರ್ಷದ ಪದವಿ ತರಗತಿಗೆ ದಾಖಲಾಗಿರುವ) ವಿದ್ಯಾರ್ಥಿಗಳಿಂದ **Central Sector Scheme of Scholarship for College and University Students**ಗಳಿಗೆ **online** ಮೂಲಕ ಅರ್ಜಿ ಸಲ್ಲಿಸುವಂತೆ ಸೂಚಿಸಲಾಗಿರುತ್ತದೆ. ಈ ಸಂಬಂಧವಾಗಿ ಕೇಂದ್ರ ಸರ್ಕಾರದ ವತಿಯಿಂದ **website:www.scholarships.gov.in**ನ **National e-Scholarship Portal**ನಲ್ಲಿ ಹೊಸ ತಂತ್ರಾಂಶವನ್ನು ಅಳವಡಿಸಲಾಗಿರುತ್ತದೆ. ಆದಕಾರಣ, ಈ **portal**ನಲ್ಲಿಯೇ 2020ರ **Fresh Batch**ನ ವಿದ್ಯಾರ್ಥಿಗಳು ಅರ್ಜಿಗಳನ್ನು **"online"** ಮೂಲಕ

ಸಲ್ಲಿಸಬೇಕಿರುತ್ತದೆ. (Link for submission of application website:www.scholarship.gov.in =» New User(Register). ಪ್ರಸ್ತುತ ಸದರಿ ಪೋರ್ಟಲ್‌ನಲ್ಲಿ ಹೊಸ ಬ್ಯಾಚ್‌ನ ಕಾರ್ಯ ಜಾರಿಯಲ್ಲಿದ್ದು, ಶೀಘ್ರದಲ್ಲಿಯೆ ಪುರ್ಣಗೊಳ್ಳಲಿರುತ್ತದೆ. ಆಸಕ್ತ ವಿದ್ಯಾರ್ಥಿಗಳು ಆಗಾಗ ಈ ವೆಬ್‌ಸೈಟನ್ನು ಗಮನಿಸುತ್ತಿದ್ದು, ಪ್ರಕ್ರಿಯೆ ಆರಂಭಗೊಂಡ ಕೊಡಲೇ ಕೇಂದ್ರ ಸರ್ಕಾರದ ವತಿಯಿಂದ ನಿಗದಿ ಪಡಿಸುವ ದಿನಾಂಕದೊಳಗಾಗಿ **"Online"** ಮೂಲಕ ಅರ್ಜಿಯನ್ನು ಸಲ್ಲಿಸಬಹುದಾಗಿರುತ್ತದೆ.

2020ನೇ ಸಾಲಿನಲ್ಲಿ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ (ಹೊಸ ಹಾಗೂ ನವೀಕರಣಗಳಿಗೆ) ಅರ್ಜಿ ಸಲ್ಲಿಸಲಿಚ್ಚಿಸುವ ವಿದ್ಯಾರ್ಥಿಗಳು ಕಡ್ಡಾಯವಾಗಿ ಆಧಾರ್ ನೋಂದಣಿ ಸಂಖ್ಯೆಯನ್ನು ಬ್ಯಾಂಕ್ ಖಾತೆಗೆ ಲಿಂಕ್ ಮಾಡಬೇಕಿರುತ್ತದೆ. ಆದಕಾರಣ, ಆಸಕ್ತ ವಿದ್ಯಾರ್ಥಿಗಳು ಆಧಾರ್ ನೊಂದಣಿ ಸಂಖ್ಯೆಯನ್ನು ಕಡ್ಡಾಯವಾಗಿ ಹೊಂದಿರಬೇಕಾಗಿ ಈ ಮೂಲಕ ತಿಳಿಸಿದೆ.

ವಿದ್ಯಾರ್ಥಿಗಳು **"online" ಮೂಲಕ** ಸಲ್ಲಿಸಿದ ಎಲ್ಲಾ ದಾಖಲೆಗಳನ್ನು (ಮೂಲ ದಾಖಲೆಗಳ ಜೊತೆಯಲ್ಲಿ) ಪರಿಶೀಲನೆಗಾಗಿ ತಾವು ಅಧ್ಯಯನ ಮಾಡುತ್ತಿರುವ ಕಾಲೇಜುಗಳ ಪ್ರಾಚಾರ್ಯರುಗಳಿಗೆ ಕೇಂದ್ರ ಸರ್ಕಾರದಿಂದ ನಿಗದಿ ಪಡಿಸುವ ದಿನಾಂಕದೊಳಗಾಗಿ ಸಲ್ಲಿಸುವುದು.

ಪ್ರಾಚಾರ್ಯರುಗಳು, ವಿದ್ಯಾರ್ಥಿಗಳು **"online"** ಮೂಲಕ ಸಲ್ಲಿಸಿರುವ ಅರ್ಜಿಗಳನ್ನು **"online"**ನಲ್ಲಿ ಕೂಲಂಕುಷವಾಗಿ ಪರಿಶೀಲಿಸಿ, ಸದರಿ ವಿದ್ಯಾರ್ಥಿಯು ತಮ್ಮ ಕಾಲೇಜಿನಲ್ಲಿ ದಾಖಲಾಗಿ, ವಿದ್ಯಾಭ್ಯಾಸ ಮುಂದುವರಿಸಿರುವ ಬಗ್ಗೆ ಹಾಗೂ ವಿದ್ಯಾರ್ಥಿಯು ಈ ವಿದ್ಯಾರ್ಥಿ ವೇತನದ ಉದ್ದೇಶಕ್ಕಾಗಿ ಖಾತೆ ತೆರೆದಿರುವ ಬ್ಯಾಂಕ್‌ನ ವಿವರಗಳನ್ನು ಪರಿಶೀಲಿಸಿ ಖಚಿತ ಪಡಿಸಿಕೊಂಡು, ಸದರಿ ಮಾಹಿತಿಯನ್ನು **"online" ಮೂಲಕವೇ ಕೇಂದ್ರ ಸರ್ಕಾರದ ವತಿಯಿಂದ ನಿಗದಿ ಪಡಿಸುವ ದಿನಾಂಕ:31-10-2020ರೊಳಗಾಗಿ ಇಲಾಖೆಗೆ ಸಲ್ಲಿಸಲು( Forward ಮಾಡಲು)** ಕೋರಿದೆ. ಯಾವುದೇ ಕಾರಣಕ್ಕೂ ನೈಜ ವಿದ್ಯಾರ್ಥಿಯ ಹೊರತು ಆಯ್ಕೆಯಾಗದ ವಿದ್ಯಾರ್ಥಿಗೆ ವಿದ್ಯಾರ್ಥಿ ವೇತನ ಜಮೆಯಾಗದಂತೆ ನೋಡಿಕೊಳ್ಳುವ ಜವಾಬ್ದಾರಿ ಪ್ರಾಚಾರ್ಯರದ್ದಾಗಿರುತ್ತದೆ. ಈ ಸಂಬಂಧ ಹೆಚ್ಚಿನ ಮಾಹಿತಿಗೆ ಕೇಂದ್ರ ಕಛೇರಿಯ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನದ ಶಾಖೆಯನ್ನು ಸಂಪರ್ಕಿಸಲು ಕೋರಿದೆ. ಪ್ರಸ್ತುತ **National e-Scholarship Portal**ನಲ್ಲಿ ವಿದ್ಯಾರ್ಥಿ ವೇತನದ ನಿಮಿತ್ತ ಕಾರ್ಯ ನಡೆಯುತ್ತಿರುವ ಕಾರಣ ಹೆಚ್ಚಿನ ಮಾಹಿತಿಯು ಲಭ್ಯವಿರುವುದಿಲ್ಲ. ಪ್ರಕ್ರಿಯೆ ಚಾಲನೆಗೊಂಡ ಕೂಡಲೇ ಸದರಿ ವಿದ್ಯಾರ್ಥಿ ವೇತನದ ಕುರಿತು ಹೆಚ್ಚಿನ ಮಾಹಿತಿ ಲಭ್ಯವಾದಲ್ಲಿ ಇಲಾಖಾ ಅಂತರ್ಜಾಲದಲ್ಲಿ ಆಳವಡಿಸಲಾಗುವುದು.

ಪದವಿ ಪೂರ್ವ ಶಿಕ್ಷಣ ಇಲಾಖೆಯ **Website: http://pue.kar.nic.in =» Scholarship =» MHRD Scholarship =» MHRD Scholarship 2020-Fresh batch**ನಿಂದ ಮಾಹಿತಿಯನ್ನು ಪಡೆದುಕೊಳ್ಳಬಹುದು.

## ವಿದ್ಯಾರ್ಥಿ ವೇತನಕ್ಕೆ ಅರ್ಜಿ ಆಹ್ವಾನ : ಆನ್‌ಲೈನ್‌ನಲ್ಲಿ ಸಲ್ಲಿಸಲು ಸೂಚನೆ

**ಬೆಂಗಳೂರು, ಸೆಪ್ಟೆಂಬರ್ 16, (ಕರ್ನಾಟಕ ವಾರ್ತೆ) :**

**ಕೇಂದ್ರ ಮಾನವ ಸಂಪನ್ಮೂಲ ಅಭಿವೃದ್ಧಿ ಮಂತ್ರಾಲಯ (M.H.R.D),** ಉನ್ನತ ಶಿಕ್ಷಣ ಇಲಾಖೆ, ಕೇಂದ್ರ ಸರ್ಕಾರ, ನವದೆಹಲಿ ಇವರ ವತಿಯಿಂದ **2020**ರಲ್ಲಿ ನಡೆದ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಸಂಯೋಜನೆವಾರು **Top 20th Percentile or 80th Percentile**ಗಿಂತ ಹೆಚ್ಚು ಅಂಕಗಳಿಸಿದ ಹಾಗೂ **ತಮ್ಮ ವಿದ್ಯಾಭ್ಯಾಸವನ್ನು ಕಡ್ಡಾಯವಾಗಿ ಉನ್ನತ ಶಿಕ್ಷಣದಲ್ಲಿ ಮುಂದುವರಿಸಿರುವಂತಹ(ಕನಿಷ್ಠ 03 ವರ್ಷದ ಪದವಿ ತರಗತಿಗೆ ದಾಖಲಾಗಿರುವ)** ವಿದ್ಯಾರ್ಥಿಗಳಿಂದ **Central Sector Scheme of Scholarship for College and University Students**ಗಳಿಗೆ **online** ಮೂಲಕ ಅರ್ಜಿ ಸಲ್ಲಿಸುವಂತೆ ಸೂಚಿಸಲಾಗಿರುತ್ತದೆ. ಈ ಸಂಬಂಧವಾಗಿ ಕೇಂದ್ರ ಸರ್ಕಾರದ ವತಿಯಿಂದ **website:www.scholarships.gov.in**ನ **National e-Scholarship Portal**ನಲ್ಲಿ ಹೊಸ ತಂತ್ರಾಂಶವನ್ನು ಅಳವಡಿಸಲಾಗಿರುತ್ತದೆ. ಆದಕಾರಣ, ಈ portalನಲ್ಲಿಯೇ **2020ರ Fresh Batchನ ವಿದ್ಯಾರ್ಥಿಗಳು ಅರ್ಜಿಗಳನ್ನು "online" ಮೂಲಕ ಸಲ್ಲಿಸಬೇಕಿರುತ್ತದೆ.** (**Link for submission of application website:www.scholarship.gov.in =» New User(Register).** ಪ್ರಸ್ತುತ ಸದರಿ ಪೋರ್ಟಲ್‌ನಲ್ಲಿ ಹೊಸ ಬ್ಯಾಚ್‌ನ ಕಾರ್ಯ ಜಾರಿಯಲ್ಲಿದ್ದು, ಶೀಘ್ರದಲ್ಲಿಯೆ ಪೂರ್ಣಗೊಳ್ಳಲಿರುತ್ತದೆ. ಆಸಕ್ತ ವಿದ್ಯಾರ್ಥಿಗಳು ಆಗಾಗ ಈ ವೆಬ್‌ಸೈಟನ್ನು ಗಮನಿಸುತ್ತಿದ್ದು, ಪ್ರಕ್ರಿಯೆ ಆರಂಭಗೊಂಡ ಕೂಡಲೇ ಕೇಂದ್ರ ಸರ್ಕಾರದ ವತಿಯಿಂದ ನಿಗದಿ ಪಡಿಸುವ ದಿನಾಂಕದೊಳಗಾಗಿ "**Online**" ಮೂಲಕ ಅರ್ಜಿಯನ್ನು ಸಲ್ಲಿಸಬಹುದಾಗಿರುತ್ತದೆ.

**ಹಾಗೂ 2020ನೇ ಸಾಲಿನಲ್ಲಿ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ** (ಹೊಸ ಹಾಗೂ ನವೀಕರಣಗಳಿಗೆ) ಅರ್ಜಿ ಸಲ್ಲಿಸಲಿಚ್ಚಿಸುವ ವಿದ್ಯಾರ್ಥಿಗಳು ಕಡ್ಡಾಯವಾಗಿ ಆಧಾರ್ ನೋಂದಣಿ ಸಂಖ್ಯೆಯನ್ನು ಬ್ಯಾಂಕ್ ಖಾತೆಗೆ ಲಿಂಕ್ ಮಾಡಬೇಕಿರುತ್ತದೆ. ಆದಕಾರಣ, ಆಸಕ್ತ ವಿದ್ಯಾರ್ಥಿಗಳು ಆಧಾರ್ ನೊಂದಣಿ ಸಂಖ್ಯೆಯನ್ನು ಕಡ್ಡಾಯವಾಗಿ ಹೊಂದಿರಬೇಕಾಗಿ ಈ ಮೂಲಕ ತಿಳಿಸಿದೆ.

ವಿದ್ಯಾರ್ಥಿಗಳು **"online" ಮೂಲಕ** ಸಲ್ಲಿಸಿದ ಎಲ್ಲಾ ದಾಖಲೆಗಳನ್ನು (ಮೂಲ ದಾಖಲೆಗಳ ಜೊತೆಯಲ್ಲಿ) ಪರಿಶೀಲನೆಗಾಗಿ ತಾವು ಅಧ್ಯಯನ ಮಾಡುತ್ತಿರುವ ಕಾಲೇಜುಗಳ ಪ್ರಾಚಾರ್ಯರುಗಳಿಗೆ ಕೇಂದ್ರ ಸರ್ಕಾರದಿಂದ ನಿಗದಿ ಪಡಿಸುವ ದಿನಾಂಕದೊಳಗಾಗಿ ಸಲ್ಲಿಸುವುದು.

ಪ್ರಾಚಾರ್ಯರುಗಳು, ವಿದ್ಯಾರ್ಥಿಗಳು **"online" ಮೂಲಕ** ಸಲ್ಲಿಸಿರುವ ಅರ್ಜಿಗಳನ್ನು **"online"**ನಲ್ಲಿ ಕೂಲಂಕುಷವಾಗಿ ಪರಿಶೀಲಿಸಿ, ಸದರಿ ವಿದ್ಯಾರ್ಥಿಯು ತಮ್ಮ ಕಾಲೇಜಿನಲ್ಲಿ ದಾಖಲಾಗಿ, ವಿದ್ಯಾಭ್ಯಾಸ ಮುಂದುವರಿಸಿರುವ ಬಗ್ಗೆ ಹಾಗೂ ವಿದ್ಯಾರ್ಥಿಯು ಈ ವಿದ್ಯಾರ್ಥಿ ವೇತನದ ಉದ್ದೇಶಕ್ಕಾಗಿ

ಖಾತೆ ತೆರೆದಿರುವ ಬ್ಯಾಂಕ್‌ನ ವಿವರಗಳನ್ನು ಪರಿಶೀಲಿಸಿ ಖಚಿತ ಪಡಿಸಿಕೊಂಡು, ಸದರಿ ಮಾಹಿತಿಯನ್ನು **"online" ಮೂಲಕವೇ ಕೇಂದ್ರ ಸರ್ಕಾರದ ವತಿಯಿಂದ ನಿಗದಿ ಪಡಿಸುವ ದಿನಾಂಕ:31-10-2020ರೊಳಗಾಗಿ ಇಲಾಖೆಗೆ ಸಲ್ಲಿಸಲು( Forward ಮಾಡಲು)** ಕೋರಿದೆ. ಯಾವುದೇ ಕಾರಣಕ್ಕೂ ನೈಜ ವಿದ್ಯಾರ್ಥಿಯ ಹೊರತು ಆಯ್ಕೆಯಾಗದ ವಿದ್ಯಾರ್ಥಿಗೆ ವಿದ್ಯಾರ್ಥಿ ವೇತನ ಜಮೆಯಾಗದಂತೆ ನೋಡಿಕೊಳ್ಳುವ ಜವಾಬ್ದಾರಿ ಪ್ರಾಚಾರ್ಯರದ್ದಾಗಿರುತ್ತದೆ. ಈ ಸಂಬಂಧ ಹೆಚ್ಚಿನ ಮಾಹಿತಿಗೆ ಕೇಂದ್ರ ಕಛೇರಿಯ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನದ ಶಾಖೆಯನ್ನು ಸಂಪರ್ಕಿಸಲು ಕೋರಿದೆ. ಪ್ರಸ್ತುತ **National e-Scholarship Portal**ನಲ್ಲಿ ವಿದ್ಯಾರ್ಥಿ ವೇತನದ ನಿಮಿತ್ತ ಕಾರ್ಯ ನಡೆಯುತ್ತಿರುವ ಕಾರಣ ಹೆಚ್ಚಿನ ಮಾಹಿತಿಯು ಲಭ್ಯವಿರುವುದಿಲ್ಲ. ಪ್ರಕ್ರಿಯೆ ಚಾಲನೆಗೊಂಡ ಕೂಡಲೇ ಸದರಿ ವಿದ್ಯಾರ್ಥಿ ವೇತನದ ಕುರಿತು ಹೆಚ್ಚಿನ ಮಾಹಿತಿ ಲಭ್ಯವಾದಲ್ಲಿ ಇಲಾಖಾ ಅಂತರ್ಜಾಲದಲ್ಲಿ ಆಳವಡಿಸಲಾಗುವುದು.

ಪದವಿ ಪೂರ್ವ ಶಿಕ್ಷಣ ಇಲಾಖೆಯ **Website: http://pue.kar.nic.in =» Scholarship =» MHRD Scholarship =» MHRD Scholarship 2020-Fresh batch**ನಿಂದ ಮಾಹಿತಿಯನ್ನು ಪಡೆದುಕೊಳ್ಳಬಹುದು.

## ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನ

**ಬೆಂಗಳೂರು, ಸೆಪ್ಟೆಂಬರ್ 16, (ಕರ್ನಾಟಕ ವಾರ್ತೆ) :**

**2019ನೇ ಸಾಲಿನಲ್ಲಿ ಕೇಂದ್ರ ಸರ್ಕಾರದ "Direct Benefit Transfer (DBT) Programme"ನ ಅಡಿಯಲ್ಲಿ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾದ ಅಭ್ಯರ್ಥಿಗಳು ಕಡ್ಡಾಯವಾಗಿ ಅವರ ಪ್ರಥಮ ನವೀಕರಣಕ್ಕೆ "online" ಮೂಲಕ ಅರ್ಜಿಯನ್ನು ಸಲ್ಲಿಸಬೇಕಾಗಿದೆ. ಈ ಸಂಬಂಧವಾಗಿ ಕೇಂದ್ರ ಸರ್ಕಾರದ ವತಿಯಿಂದ website:www.scholarships.gov.ನ National e-Scholarship Portalನಲ್ಲಿ ಹೊಸ ತಂತ್ರಾಂಶವನ್ನು ಅಳವಡಿಸಲಾಗಿರುತ್ತದೆ. ಆದಕಾರಣ, 2019ನೇ ಸಾಲಿನಲ್ಲಿ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾದ ವಿದ್ಯಾರ್ಥಿಗಳು ಪ್ರಥಮ ನವೀಕರಣದ ನಿಮಿತ್ತ ಈ portal ನಲ್ಲಿಯೇ ಅರ್ಜಿಗಳನ್ನು "online" ಮೂಲಕ ಸಲ್ಲಿಸಬೇಕಿರುತ್ತದೆ. ವಿದ್ಯಾರ್ಥಿಗಳು ಈ ವೆಬ್‌ಸೈಟನ್ನು ಕೂಡಲೇ ಸಂಪರ್ಕಿಸಿ "online" ಮೂಲಕ ದಿನಾಂಕ:31-10-2020 ರೊಳಗಾಗಿ ಅರ್ಜಿಯನ್ನು ಸಲ್ಲಿಸುವುದು.**

ಇಲಾಖಾ ವೆಬ್‌ಸೈಟ್‌ನಲ್ಲಿಯೂ ಕೂಡ 2019ನೇ ಸಾಲಿನಲ್ಲಿ ಆಯ್ಕೆಗೊಂಡಿರುವ ವಿದ್ಯಾರ್ಥಿಗಳಿಗೆ **"online"** ಮೂಲಕ ಪ್ರಥಮ ನವೀಕರಣಕ್ಕೆ ಅರ್ಜಿ ಸಲ್ಲಿಸುವ ಕುರಿತು ಸುತ್ತೋಲೆಯನ್ನು ಅಳವಡಿಸಲಾಗಿದೆ. ವೆಬ್‌ಸೈಟ್ ಸಂಖ್ಯೆ:**http://pue.kar.nic.in** =>**Scholarship=>MHRD Scholarship=> MHRD Scholarship 2019 - I RENEWAL** ವಿದ್ಯಾರ್ಥಿಗಳು ಈ ವೆಬ್‌ಸೈಟನ್ನು ಸಂಪರ್ಕಿಸಿ ತಮಗೆ ಸಂಬಂಧಪಟ್ಟ ಮಾಹಿತಿಯನ್ನು ಪಡೆದು ದಿನಾಂಕ: 31-10-2020ರೊಳಗಾಗಿ **Online** ಮೂಲಕ ಅರ್ಜಿಯನ್ನು ಸಲ್ಲಿಸುವುದು. ಪ್ರಥಮ ನವೀಕರಣ ಹಾಗೂ ಇನ್ನು ಮುಂದಿನ ನವೀಕರಣಗಳಿಗೆ ಆಧಾರ್ ಸಂಖ್ಯೆಯನ್ನು ಪಡೆದು ಬ್ಯಾಂಕ್ ಖಾತೆಯೊಂದಿಗೆ ಲಿಂಕ್ ಮಾಡಿರುವುದು. ಪ್ರಾಚಾರ್ಯರುಗಳು / ಸಂಸ್ಥೆಯವರು ಅರ್ಹ ವಿದ್ಯಾರ್ಥಿಗಳ ಅರ್ಜಿಗಳನ್ನು ಪರಿಶೀಲಿಸಿ ಅನುಮೋದಿಸುವ / ತಿರಸ್ಕರಿಸುವ ಕಾರ್ಯವನ್ನು ತಮ್ಮ ಹಂತದಲ್ಲಿಯೇ ನಿರ್ವಹಿಸುವುದು.

## ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನ ಆನ್‌ಲೈನ್‌ನಲ್ಲಿ ಸಲ್ಲಿಸಲು ಸೂಚನೆ

**ಬೆಂಗಳೂರು, ಸೆಪ್ಟೆಂಬರ್ 16, (ಕರ್ನಾಟಕ ವಾರ್ತೆ) :**

2018ನೇ ಸಾಲಿನಲ್ಲಿ ಕೇಂದ್ರ ಸರ್ಕಾರದ **"Direct Benefit Transfer (DBT) Programme"** ನ ಅಡಿಯಲ್ಲಿ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾದ ಅಭ್ಯರ್ಥಿಗಳು ಕಡ್ಡಾಯವಾಗಿ ಅವರ **ದ್ವಿತೀಯ** ನವೀಕರಣಕ್ಕೆ **"online"** ಮೂಲಕ ಅರ್ಜಿಯನ್ನು ಸಲ್ಲಿಸಬೇಕಾಗಿದೆ. ಈ ಸಂಬಂಧವಾಗಿ ಕೇಂದ್ರ ಸರ್ಕಾರದ ವತಿಯಿಂದ **website:www.scholarships.gov.**ನ **National e-Scholarship Portal**ನಲ್ಲಿ ಹೊಸ ತಂತ್ರಾಂಶವನ್ನು ಅಳವಡಿಸಲಾಗಿರುತ್ತದೆ. ಆದಕಾರಣ, 2018ನೇ ಸಾಲಿನಲ್ಲಿ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾದ ವಿದ್ಯಾರ್ಥಿಗಳು **ದ್ವಿತೀಯ ನವೀಕರಣದ** ನಿಮಿತ್ತ ಈ **portal** ನಲ್ಲಿಯೇ ಅರ್ಜಿಗಳನ್ನು **"online"** ಮೂಲಕ ಸಲ್ಲಿಸಬೇಕಿರುತ್ತದೆ. ವಿದ್ಯಾರ್ಥಿಗಳು ಈ ವೆಬ್‌ಸೈಟನ್ನು ಕೂಡಲೇ ಸಂಪರ್ಕಿಸಿ **"online"** ಮೂಲಕ ದಿನಾಂಕ:**31-10-2020** ರೊಳಗಾಗಿ ಅರ್ಜಿಯನ್ನು ಸಲ್ಲಿಸುವುದು.

ಇಲಾಖಾ ವೆಬ್‌ಸೈಟ್‌ನಲ್ಲಿಯೂ ಕೂಡ **2018**ನೇ ಸಾಲಿನಲ್ಲಿ ಆಯ್ಕೆಗೊಂಡಿರುವ ವಿದ್ಯಾರ್ಥಿಗಳಿಗೆ **"online"** ಮೂಲಕ **ದ್ವಿತೀಯ ನವೀಕರಣಕ್ಕೆ** ಅರ್ಜಿ ಸಲ್ಲಿಸುವ ಕುರಿತು ಸುತ್ತೋಲೆಯನ್ನು ಅಳವಡಿಸಲಾಗಿದೆ. ವೆಬ್‌ಸೈಟ್ ಸಂಖ್ಯೆ:**http://pue.kar.nic.in** =>**Scholarship=>MHRD Scholarship=> MHRD Scholarship 2018 - II RENEWAL** ವಿದ್ಯಾರ್ಥಿಗಳು ಈ ವೆಬ್‌ಸೈಟನ್ನು ಸಂಪರ್ಕಿಸಿ ತಮಗೆ ಸಂಬಂಧಪಟ್ಟ ಮಾಹಿತಿಯನ್ನು ಪಡೆದು ದಿನಾಂಕ: **31-10-2020ರೊಳಗಾಗಿ** **Online** ಮೂಲಕ

ಅರ್ಜಿಯನ್ನು ಸಲ್ಲಿಸುವುದು. **ದ್ವಿತೀಯ ನವೀಕರಣ** ಹಾಗೂ ಇನ್ನು ಮುಂದಿನ ನವೀಕರಣಗಳಿಗೆ ಆಧಾರ್ ಸಂಖ್ಯೆಯನ್ನು ಪಡೆದು ಬ್ಯಾಂಕ್ ಖಾತೆಯೊಂದಿಗೆ ಲಿಂಕ್ ಮಾಡಿರುವುದು. ಪ್ರಾಚಾರ್ಯರುಗಳು / ಸಂಸ್ಥೆಯವರು ಅರ್ಹ ವಿದ್ಯಾರ್ಥಿಗಳ ಅರ್ಜಿಗಳನ್ನು ಪರಿಶೀಲಿಸಿ ಅನುಮೋದಿಸುವ / ತಿರಸ್ಕರಿಸುವ ಕಾರ್ಯವನ್ನು ತಮ್ಮ ಹಂತದಲ್ಲಿಯೇ ನಿರ್ವಹಿಸುವುದು.

## 2017ನೇ ಸಾಲಿನಲ್ಲಿ ಕೇಂದ್ರ ಸರ್ಕಾರದ ವಿದ್ಯಾರ್ಥಿವೇತನ ಆನ್‌ಲೈನ್‌ನಲ್ಲಿ ಅರ್ಜಿ ಆಹ್ವಾನ

**2017ನೇ ಸಾಲಿನಲ್ಲಿ ಕೇಂದ್ರ ಸರ್ಕಾರದ "Direct Benefit Transfer (DBT) Programme" ನ ಅಡಿಯಲ್ಲಿ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾದ ಅಭ್ಯರ್ಥಿಗಳು ಕಡ್ಡಾಯವಾಗಿ ಅವರ ತೃತೀಯ ನವೀಕರಣಕ್ಕೆ "online" ಮೂಲಕ ಅರ್ಜಿಯನ್ನು ಸಲ್ಲಿಸಬೇಕಾಗಿದೆ. ಈ ಸಂಬಂಧವಾಗಿ ಕೇಂದ್ರ ಸರ್ಕಾರದ ವತಿಯಿಂದ website:www.scholarships.gov.ನ National e-Scholarship Portalನಲ್ಲಿ ಹೊಸ ತಂತ್ರಾಂಶವನ್ನು ಅಳವಡಿಸಲಾಗಿರುತ್ತದೆ. ಆದಕಾರಣ, 2017ನೇ ಸಾಲಿನಲ್ಲಿ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾದ ವಿದ್ಯಾರ್ಥಿಗಳು ತೃತೀಯ ನವೀಕರಣದ ನಿಮಿತ್ತ ಈ portal ನಲ್ಲಿಯೇ ಅರ್ಜಿಗಳನ್ನು "online" ಮೂಲಕ ಸಲ್ಲಿಸಬೇಕಿರುತ್ತದೆ. ವಿದ್ಯಾರ್ಥಿಗಳು ಈ ವೆಬ್‌ಸೈಟನ್ನು ಕೂಡಲೇ ಸಂಪರ್ಕಿಸಿ "online" ಮೂಲಕ ದಿನಾಂಕ:31–10–2020 ರೊಳಗಾಗಿ ಅರ್ಜಿಯನ್ನು ಸಲ್ಲಿಸುವುದು.**

**ಇಲಾಖಾ ವೆಬ್‌ಸೈಟ್‌ನಲ್ಲಿಯೂ ಕೂಡ 2017ನೇ ಸಾಲಿನಲ್ಲಿ ಆಯ್ಕೆಗೊಂಡಿರುವ ವಿದ್ಯಾರ್ಥಿಗಳಿಗೆ "online" ಮೂಲಕ ತೃತೀಯ ನವೀಕರಣಕ್ಕೆ ಅರ್ಜಿ ಸಲ್ಲಿಸುವ ಕುರಿತು ಸುತ್ತೋಲೆಯನ್ನು ಅಳವಡಿಸಲಾಗಿದೆ. ವೆಬ್‌ಸೈಟ್ ಸಂಖ್ಯೆ:http://pue.kar.nic.in =>Scholarship=>MHRD Scholarship=> MHRD Scholarship 2017 - III RENEWAL. ವಿದ್ಯಾರ್ಥಿಗಳು ಈ ವೆಬ್‌ಸೈಟನ್ನು ಸಂಪರ್ಕಿಸಿ ತಮಗೆ ಸಂಬಂಧಪಟ್ಟ ಮಾಹಿತಿಯನ್ನು ಪಡೆದು ದಿನಾಂಕ: 31–10–2020ರೊಳಗಾಗಿ Online ಮೂಲಕ ಅರ್ಜಿಯನ್ನು ಸಲ್ಲಿಸುವುದು. ತೃತೀಯ ನವೀಕರಣ ಹಾಗೂ ಇನ್ನು ಮುಂದಿನ ನವೀಕರಣಗಳಿಗೆ ಆಧಾರ್ ಸಂಖ್ಯೆಯನ್ನು ಪಡೆದು ಬ್ಯಾಂಕ್ ಖಾತೆಯೊಂದಿಗೆ ಲಿಂಕ್ ಮಾಡಿರುವುದು. ಪ್ರಾಚಾರ್ಯರುಗಳು / ಸಂಸ್ಥೆಯವರು ಅರ್ಹ ವಿದ್ಯಾರ್ಥಿಗಳ ಅರ್ಜಿಗಳನ್ನು ಪರಿಶೀಲಿಸಿ ಅನುಮೋದಿಸುವ / ತಿರಸ್ಕರಿಸುವ ಕಾರ್ಯವನ್ನು ತಮ್ಮ ಹಂತದಲ್ಲಿಯೇ ನಿರ್ವಹಿಸುವುದು.**

## 2016ನೇ ಸಾಲಿನಲ್ಲಿ ಕೇಂದ್ರ ಸರ್ಕಾರದ ವಿದ್ಯಾರ್ಥಿವೇತನ ಆನ್‌ಲೈನ್‌ನಲ್ಲಿ ಅರ್ಜಿ ಆಹ್ವಾನ

2016ನೇ ಸಾಲಿನಲ್ಲಿ ಕೇಂದ್ರ ಸರ್ಕಾರದ **"Direct Benefit Transfer (DBT) Programme"** ನ ಅಡಿಯಲ್ಲಿ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾದ ಅಭ್ಯರ್ಥಿಗಳು ಕಡ್ಡಾಯವಾಗಿ ಅವರ **ನಾಲ್ಕನೇಯ ನವೀಕರಣಕ್ಕೆ "online"** ಮೂಲಕ ಅರ್ಜಿಯನ್ನು ಸಲ್ಲಿಸಬೇಕಾಗಿದೆ. ಈ ಸಂಬಂಧವಾಗಿ ಕೇಂದ್ರ

ಸರ್ಕಾರದ ವತಿಯಿಂದ **website:www.scholarships.gov.**ನ **National e-Scholarship Portal**ನಲ್ಲಿ ಹೊಸ ತಂತ್ರಾಂಶವನ್ನು ಅಳವಡಿಸಲಾಗಿರುತ್ತದೆ. ಆದಕಾರಣ, **2016**ನೇ ಸಾಲಿನಲ್ಲಿ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾದ ವಿದ್ಯಾರ್ಥಿಗಳು **ನಾಲ್ಕನೇಯ ನವೀಕರಣದ** ನಿಮಿತ್ತ ಈ **portal** ನಲ್ಲಿಯೇ ಅರ್ಜಿಗಳನ್ನು **"online"** ಮೂಲಕ ಸಲ್ಲಿಸಬೇಕಿರುತ್ತದೆ. ವಿದ್ಯಾರ್ಥಿಗಳು ಈ ವೆಬ್‌ಸೈಟನ್ನು ಕೂಡಲೇ ಸಂಪರ್ಕಿಸಿ **"online"** ಮೂಲಕ ದಿನಾಂಕ:**31–10–2020** ರೊಳಗಾಗಿ ಅರ್ಜಿಯನ್ನು ಸಲ್ಲಿಸುವುದು.

ಇಲಾಖಾ ವೆಬ್‌ಸೈಟ್‌ನಲ್ಲಿಯೂ ಕೂಡ **2016**ನೇ ಸಾಲಿನಲ್ಲಿ ಆಯ್ಕೆಗೊಂಡಿರುವ ವಿದ್ಯಾರ್ಥಿಗಳಿಗೆ **"online"** ಮೂಲಕ **ನಾಲ್ಕನೇಯ ನವೀಕರಣಕ್ಕೆ** ಅರ್ಜಿ ಸಲ್ಲಿಸುವ ಕುರಿತು ಸುತ್ತೋಲೆಯನ್ನು ಅಳವಡಿಸಲಾಗಿದೆ. ವೆಬ್‌ಸೈಟ್ ಸಂಖ್ಯೆ:**http://pue.kar.nic.in** =>**Scholarship=>MHRD Scholarship=> MHRD Scholarship 2016 - IV RENEWAL** ವಿದ್ಯಾರ್ಥಿಗಳು ಈ ವೆಬ್‌ಸೈಟನ್ನು ಸಂಪರ್ಕಿಸಿ ತಮಗೆ ಸಂಬಂಧಪಟ್ಟ ಮಾಹಿತಿಯನ್ನು ಪಡೆದು ದಿನಾಂಕ: **31–10–2020**ರೊಳಗಾಗಿ **Online** ಮೂಲಕ ಅರ್ಜಿಯನ್ನು ಸಲ್ಲಿಸುವುದು. **ನಾಲ್ಕನೇಯ ನವೀಕರಣ** ಹಾಗೂ ಇನ್ನು ಮುಂದಿನ ನವೀಕರಣಗಳಿಗೆ ಆಧಾರ್ ಸಂಖ್ಯೆಯನ್ನು ಪಡೆದು ಬ್ಯಾಂಕ್ ಖಾತೆಯೊಂದಿಗೆ ಲಿಂಕ್ ಮಾಡಿರುವುದು. ಪ್ರಾಚಾರ್ಯರುಗಳು / ಸಂಸ್ಥೆಯವರು ಅರ್ಹ ವಿದ್ಯಾರ್ಥಿಗಳ ಅರ್ಜಿಗಳನ್ನು ಪರಿಶೀಲಿಸಿ ಅನುಮೋದಿಸುವ / ತಿರಸ್ಕರಿಸುವ ಕಾರ್ಯವನ್ನು ತಮ್ಮ ಹಂತದಲ್ಲಿಯೇ ನಿರ್ವಹಿಸುವುದು.